# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 37(61) |
| ಸದಸ್ಯರ ಹೆಸರು | : ಶ್ರೀ ಮುನಿರಾಜುಗೌಡ ಪಿ.ಎಂ.( ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 13.02.2023 |
| ಉತ್ತರಿಸಬೇಕಾದ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನಲ್ಲಿನ ಕೆಲವು ಖಾಸಗಿ ಶಾಲೆಗಳು ಸಿ.ಬಿ.ಎಸ್.ಇ/ ಐ.ಸಿ.ಎಸ್.ಇ ಮಾನ್ಯತೆ ಇಲ್ಲದಿದ್ದರೂ ಸಹ ಸಿ.ಬಿ.ಎಸ್.ಇ/ಐ.ಸಿ.ಎಸ್.ಇ ಮಾನ್ಯತೆ ಪಡೆದಿರುವುದಾಗಿ ಮಕ್ಕಳನ್ನು ಶಾಲೆಗೆ ದಾಖಲಾತಿ ಮಾಡಿಕೊಂಡು ಅಧಿಕ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಬಂದಿದೆ. |
| ಆ) | ಬೆಂಗಳೂರಿನಲ್ಲಿ ಸಿ.ಬಿ.ಎಸ್.ಇ/ಐ.ಸಿ.ಎಸ್.ಇ ಯಿಂದ ಮಾನ್ಯತೆ ಪಡೆದ ಶಾಲೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ಬೆಂಗಳೂರು ನಗರದಲ್ಲಿ ಸಿ.ಬಿ.ಎಸ್.ಸಿ / ಐ.ಸಿ.ಎಸ್.ಇ ಮಂಡಳಿಯಿಂದ ಮಾನ್ಯತೆ ಪಡೆದ ಶಾಲೆಗಳ ವಿವರ ಕೆಳಕಂಡಂತಿವೆ.<br>**ಸಿ.ಬಿ.ಎಸ್.ಸಿ**: 416; **ಐ.ಸಿ.ಎಸ್.ಇ**: 245; **ಒಟ್ಟು**: 661 |
| ಇ) | ಸಿ.ಬಿ.ಎಸ್.ಇ/ಐ.ಸಿ.ಎಸ್.ಇ. ಮಾನ್ಯತೆ ಇಲ್ಲದಿದ್ದರೂ ಸಹ ಮಾನ್ಯತೆ ಪಡೆದಿರುವುದಾಗಿ ಸಾರ್ವಜನಿಕರನ್ನು ವಂಚಿಸುತ್ತಿರುವ ಶಾಲೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು | ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಇತರೆ ಪಠ್ಯಕ್ರಮ ಬೋಧನೆ ಮಾಡುತ್ತಿರುವ ಶಾಲೆಗಳನ್ನು ಗುರುತಿಸಲು ಉಪನಿರ್ದೇಶಕರುಗಳಿಗೆ ಸೂಚನೆ ನೀಡಿದ್ದು ಅಂತಹ ಶಾಲೆಗಳ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲು ತಿಳಿಸಿದೆ. ಮುಂದುವರೆದು, ಶಾಲೆಗಳ ನೋಂದಣಿ, ಮಾನ್ಯತೆ, ಪಠ್ಯಕ್ರಮ ವಿಷಯದ ಕುರಿತು ಇಲಾಖಾ ತಂತ್ರಾಂಶದಲ್ಲಿ ಶಾಲಾ ಆಡಳಿತ ಮಂಡಳಿಗಳು ದಾಖಲೆಗಳನ್ನು ಕಡ್ಡಾಯವಾಗಿ ಇಂದೀಕರಿಸಲು ತಂತ್ರಾಂಶ ರೂಪಿಸಲಾಗುತ್ತಿದ್ದು, ತಂತ್ರಾಂಶದಲ್ಲಿ ಸದರಿ ದಾಖಲೆಗಳು ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗುವಂತೆ ಅವಕಾಶ ಕಲ್ಪಿಸಲಾಗುತ್ತಿದೆ.. |
| ಈ) | ಪಾಲಕರು/ಸಾರ್ವಜನಿಕರಲ್ಲಿ ಶಾಲೆಗಳ ಮಾನ್ಯತೆ ಪಠ್ಯಕ್ರಮದ ವಿಷಯದ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | |

ಇಪಿ 65 ಪಿಜಿಸಿ 2023

**(ಬಿ.ಸಿ. ನಾಗೇಶ್)**
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.